ಕಾಲೇಜು ಶಿಕ್ಷಣ ಇಲಾಖೆ
ಕರ್ನಾಟಕ ಸರ್ಕಾರ
Department of Collegiate Education
Government of Karnataka

ಸಂಖ್ಯೆ: ಕಾಶಿಇ/ಮಾತಂವಿ/27/ಲ್ಯಾಪ್‌ಟಾಪ್/2017-18

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ: 13.10.2017

**ಸುತ್ತೋಲೆ**

ವಿಷಯ : ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಪ.ಜಾ/ಪ.ಪಂಗಡದ ಪ್ರಥಮ ಪದವಿ ವಿದ್ಯಾರ್ಥಿಗಳಿಗೆ ಇ-ಕಂಟೆಂಟ್ ತುಂಬಿಸಿದ ಲ್ಯಾಪ್‌ಟಾಪ್‌ಗಳನ್ನು ಕಲಿಕಾ ಸಾಮಗ್ರಿಯಾಗಿ ಒದಗಿಸುವ ಬಗ್ಗೆ

ಉಲ್ಲೇಖ: 1. ಸರ್ಕಾರದ ಆದೇಶ ಸಂಖ್ಯೆ: ಇಡಿ 4 ಹೆಚ್‌ಪಿಸಿ 2017, ಬೆಂಗಳೂರು ದಿ. 18/02/2017, 21/03/2017, 27/03/2017.

2. ಈ ಕಛೇರಿ ಸುತ್ತೋಲೆ ಸಂಖ್ಯೆ: ಕಾಶಿಇ/ಮಾತಂವಿ/42/ಲ್ಯಾಪ್‌ಟಾಪ್/16-17, ದಿನಾಂಕ:04/ 04/ 2017, 05/08/2017, 11/10/2017

>>><<

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ, ಕುಟುಂಬದ ವಾರ್ಷಿಕ ವರಮಾನ ರೂ.2.50 ಲಕ್ಷಗಳಿಗಿಂತ ಕಡಿಮೆ ಇರುವ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಇ-ಕಂಟೆಂಟ್ ತುಂಬಿಸಿದ ಲ್ಯಾಪ್‌ಟಾಪ್‌ಗಳನ್ನು ಕಲಿಕಾ ಸಾಮಗ್ರಿಯಾಗಿ ಒದಗಿಸುವ ಸಂಬಂಧದಲ್ಲಿ ಲ್ಯಾಪ್‌ಟಾಪ್‌ಗಳನ್ನು ಸರಬರಾಜುದಾರರು ಕಾಲೇಜುಗಳಿಗೆ ಒದಗಿಸುವ ಸಂದರ್ಭದಲ್ಲಿ ಹಾಗೂ ವಿದ್ಯಾರ್ಥಿಗಳಿಗೆ ಅವುಗಳನ್ನು ಹಂಚಿಕೆ ಮಾಡುವ ಸಂದರ್ಭದಲ್ಲಿ ಅನುಸರಿಸಬೇಕಾದ ಕ್ರಮಗಳ ಬಗ್ಗೆ ಮಾಹಿತಿ ನೀಡಲು ಕಾಲೇಜು ಶಿಕ್ಷಣ ಇಲಾಖೆಯ ಎಲ್ಲಾ ಸರ್ಕಾರಿ ಕಾಲೇಜುಗಳ ಪ್ರಾಂಶುಪಾಲರು, ನ್ಯಾಕ್ ಸಮನ್ವಯಾಧಿಕಾರಿಗಳು ಮತ್ತು ಐ.ಟಿ. ಸಮನ್ವಯಾಧಿಕಾರಿಗಳಿಗೆ ಪ್ರಾದೇಶಿಕ ಕಛೇರಿವಾರು ಈ ಕೆಳಗಿನ ವೇಳಾಪಟ್ಟಿಯನ್ವಯ ತರಬೇತಿ ಶಿಬಿರವನ್ನು ಏರ್ಪಡಿಸಲಾಗಿದೆ.

**ತರಬೇತಿ ವೇಳಾಪಟ್ಟಿ**

| ಕ್ರ.ಸಂ | ಪ್ರಾದೇಶಿಕ ಕಛೇರಿ | ದಿನಾಂಕ/ಸಮಯ | ಸ್ಥಳ |
|---|---|---|---|
| 1 | **ಪ್ರಾದೇಶಿಕ ಕಛೇರಿ, ಗುಲ್ಬರ್ಗಾ ಮತ್ತು ಮೈಸೂರು ವ್ಯಾಪ್ತಿಯ ಎಲ್ಲಾ ಸ.ಪ್ರ.ದ.ಕಾಲೇಜುಗಳು** | ದಿನಾಂಕ:21/10/2017 (ಶನಿವಾರ) ಬೆಳಗ್ಗೆ 11.00ಗಂಟೆಗೆ | ರಾಜ್ಯ ಆಯುಕ್ತರ ಕಛೇರಿ, ಭಾರತ್ ಸ್ಕೌಟ್ಸ್ & ಗೈಡ್ಸ್, ಪ್ಯಾಲೇಸ್ ರಸ್ತೆ, ಬೆಂಗಳೂರು-1 (ಮಹಾರಾಣಿ ವಿಜ್ಞಾನ ಕಾಲೇಜು, ಬೆಂಗಳೂರು ಸಮೀಪ) |
| 2 | **ಪ್ರಾದೇಶಿಕ ಕಛೇರಿ, ಬೆಂಗಳೂರು ಮತ್ತು ಶಿವಮೊಗ್ಗ ವ್ಯಾಪ್ತಿಯ ಎಲ್ಲಾ ಸ.ಪ್ರ.ದ ಕಾಲೇಜುಗಳು** | ದಿನಾಂಕ:23/10/2017 (ಸೋಮವಾರ) ಬೆಳಗ್ಗೆ 11.00ಗಂಟೆಗೆ | |
| 3 | **ಪ್ರಾದೇಶಿಕ ಕಛೇರಿ, ಧಾರವಾಡ ಮತ್ತು ಮಂಗಳೂರು ವ್ಯಾಪ್ತಿಯ ಎಲ್ಲಾ ಸ.ಪ್ರ.ದ ಕಾಲೇಜುಗಳು** | ದಿನಾಂಕ:25/10/2017 (ಬುಧವಾರ) ಬೆಳಗ್ಗೆ 11.00ಗಂಟೆಗೆ | |

**ಮೇಲೆ ನಿಗದಿಪಡಿಸಲಾದ ವೇಳಾಪಟ್ಟಿಯನುಸಾರವಾಗಿ, ತರಬೇತಿ ದಿನಾಂಕಗಳಂದು ಪ್ರಾಂಶುಪಾಲರುಗಳು ತಮ್ಮ ಕಾಲೇಜಿನ** ನ್ಯಾಕ್ ಸಮನ್ವಯಾಧಿಕಾರಿಗಳು ಮತ್ತು ಐ.ಟಿ. ಸಮನ್ವಯಾಧಿಕಾರಿಗಳೊಂದಿಗೆ ಲ್ಯಾಪ್‌ಟಾಪ್ ಪಡೆಯಲು ಅರ್ಹರಿರುವ ವಿದ್ಯಾರ್ಥಿಗಳ ಪಟ್ಟಿಯೊಂದಿಗೆ ತಪ್ಪದೆ ಹಾಜರಾಗುವಂತೆ ಸೂಚಿಸಲಾಗಿದೆ.

13/10

ಕಾಲೇಜು ಶಿಕ್ಷಣ ಆಯುಕ್ತರು

ಇವರಿಗೆ,

1. ಪ್ರಾದೇಶಿಕ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು, ಮೈಸೂರು, ಮಂಗಳೂರು, ಧಾರವಾಡ, ಶಿವಮೊಗ್ಗ ಮತ್ತು ಗುಲ್ಬರ್ಗಾ- ಮಾಹಿತಿ ಮತ್ತು ಸೂಕ್ತ ಕ್ರಮಕ್ಕಾಗಿ
2. ಕಾಲೇಜು ಶಿಕ್ಷಣ ಇಲಾಖೆಯ ವ್ಯಾಪ್ತಿಗೆ ಒಳಪಡುವ ಎಲ್ಲಾ ಸರ್ಕಾರಿ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳಿಗೆ- ಮಾಹಿತಿ ಮತ್ತು ಸೂಕ್ತ ಕ್ರಮಕ್ಕಾಗಿ

ಪ್ರತಿಯನ್ನು,

1. ಕಾಲೇಜು ಶಿಕ್ಷಣ ಆಯುಕ್ತರ/ನಿರ್ದೇಶಕರ/ಮುಖ್ಯ ಆಡಳಿತಾಧಿಕಾರಿಗಳ/ಹೆಚ್ಚುವರಿ ನಿರ್ದೇಶಕರ ಆಪ್ತ ಶಾಖೆಗೆ-ಮಾಹಿತಿಗಾಗಿ
2. ಕಛೇರಿ ಪ್ರತಿ.

NO. 1, 2nd Floor, DTE Building, Palace Road, Bangalore - 560 001
Phone: 080 2226 3327, Fax: 080 2228 3758, email: bngcce@kar.nic.in